# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 23-03-2021 ಪ್ರಶ್ನೆ ಸಂಖ್ಯೆ : 1627(1910)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 23-03-2021

ಉತ್ತರಿಸುವ ಸಚಿವರು: ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು

ವಿಷಯ : ಶ್ರವಣಬೆಳಗೊಳವನ್ನು ಪಟ್ಟಣ ಪಂಚಾಯಿತಿಯಾಗಿ ರಚಿಸುವ ಬಗ್ಗೆ

(ಅ) ಯಾವುದೇ ಹೋಬಳಿ ಕೇಂದ್ರ ಅಥವಾ ಗ್ರಾಮವನ್ನು ಕೇಂದ್ರವನ್ನಾಗಿಸಿಕೊಂಡು ಹೊಸ ಪಟ್ಟಣ ಪಂಚಾಯಿತಿ ರಚನೆ ಮಾಡಲು ಇರಬೇಕಾದ ಅರ್ಹತೆ/ಮಾನದಂಡಗಳೇನು; (ಆದೇಶ ಸಹಿತ ವಿವರ ನೀಡುವುದು)

(ಆ) ಹಾಸನ ಜಿಲ್ಲೆ, ಚನ್ನರಾಯಪಟ್ಟಣ ತಾಲ್ಲೂಕಿನ ಶ್ರವಣಬೆಳಗೊಳ ಹೋಬಳಿ ಕೇಂದ್ರವು ಧಾರ್ಮಿಕ, ಶೈಕ್ಷಣಿಕ ಮತ್ತು ವಾಣಿಜ್ಯ ಕೇಂದ್ರವಾಗಿ ಬೆಳವಣಿಗೆ ಹೊಂದಿದ್ದು, ಶ್ರವಣಬೆಳಗೊಳ ಮತ್ತು ಇದರ ಅಕ್ಕ ಪಕ್ಕದಲ್ಲಿರುವ ಗ್ರಾಮಗಳನ್ನು ಸೇರಿಸಿಕೊಂಡು ಶ್ರವಣಬೆಳಗೊಳವನ್ನು ಹೊಸ ಪಟ್ಟಣ ಪಂಚಾಯಿತಿಯನ್ನಾಗಿ ಘೋಷಣೆ ಮಾಡುವ ಆಲೋಚನೆ ಸರ್ಕಾರಕ್ಕಿದೆಯೇ ಅಥವಾ ಶ್ರವಣಬೆಳಗೊಳವನ್ನು ಹೊಸ ಪಟ್ಟಣ ಪಂಚಾಯಿತಿಯನ್ನಾಗಿ ಘೋಷಣೆ ಮಾಡುವ ಬಗ್ಗೆ ಸರ್ಕಾರದ ನಿಲುವೇನು? (ಮಾಹಿತಿ ನೀಡುವುದು)